ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: 

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE : 15/12/2020

# ಗೋಹತ್ಯೆ ನಿಷೇಧಕ್ಕೆ ಯೋಗಿ ಜತೆ ಚವ್ಹಾಣ್ ಚರ್ಚೆ

## ಉ.ಪ್ರದೇಶದ ಗೋಹತ್ಯೆ ನಿಷೇಧ ಕಾಯ್ದೆ ಮಾಹಿತಿ ಪಡೆದ ಸಚಿವ | ಇಂದು ಗುಜರಾತ್‌ಗೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ರಾಜ್ಯದಲ್ಲಿ ಗೋ ಹತ್ಯೆ ನಿಷೇಧ ಮತ್ತು ಗೋ ಹಂತಕಕರಿಗೆ ಕಠಿಣ ಶಿಕ್ಷೆ ನೀಡುವ ಕಾನೂನು ಜಾರಿಮಾಡುವ ಸಂಬಂಧ ಪಶುಸಂಗೋಪನೆ, ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವ ಪ್ರಭು ಚವ್ಹಾಣ್ ಅವರು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಅವರನ್ನು ಭೇಟಿಯಾಗಿ ಅಲ್ಲಿನ ಗೋಹತ್ಯೆ ನಿಷೇಧ ಕಾಯ್ದೆಯ ಬಗ್ಗೆ ಚರ್ಚಿಸಿ ಮಾಹಿತಿ ಪಡೆದುಕೊಂಡಿದ್ದಾರೆ. ಶನಿವಾರ ಗುಜರಾತ್‌ಗೆ ಭೇಟಿ ನೀಡಿ ಅಲ್ಲಿನ ಅಧಿಕಾರಿಗಳ ಜೊತೆಯೂ ಸಮಾಲೋಚಿಸಲಿದ್ದಾರೆ.

ಡಿಸೆಂಬರ್ 7 ರಂದು ಆರಂಭಗೊಳ್ಳಲಿರುವ ರಾಜ್ಯ ವಿಧಾನಮಂಡಲದ ಚಳಿಗಾಲದ ಅಧಿವೇಶನ ಸಂದರ್ಭದಲ್ಲಿ ಗೋಹತ್ಯೆ ನಿಷೇಧದ ಮಸೂದೆ ಮಂಡಿಸಿ ಒಪ್ಪಿಗೆ ಪಡೆಯುವ ಉದ್ದೇಶದಿಂದ ಪ್ರಭು ಚವ್ಹಾಣ್ ಗೋಹತ್ಯೆ ನಿಷೇಧಿಸಿರುವ ಈ ಎರಡು ರಾಜ್ಯಗಳಿಗೆ ಅಧಿಕಾರಿಗಳೊಂದಿಗೆ ಭೇಟಿ ನೀಡಿದ್ದಾರೆ. ಕರ್ನಾಟಕ ಗೋ ಹತ್ಯೆ ನಿಷೇಧಿಸುವ ಶಾಸನ ರೂಪಿಸಲು ಮುಂದಾಗಿರುವುದು ಸಂತಸ ತಂದಿದೆ. ಉತ್ತರ ಪ್ರದೇಶದಲ್ಲಿ ಗೋ ಹತ್ಯೆ ನಿಷೇಧ ಕಾನೂನು ಕಟ್ಟುನಿಟ್ಟಾಗಿ ಪಾಲನೆ ಆಗುತ್ತಿದೆ. ಕರ್ನಾಟಕವು ಇದೇ ಮಾದರಿ ಅನುಸರಿಸಲಿದೆ ಎಂದು ಉತ್ತರ ಪ್ರದೇಶದ ಸಿಎಂ ಯೋಗಿ ಆದಿತ್ಯನಾಥ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ ಎಂದು ಚವ್ಹಾಣ್ ಕಚೇರಿ ಪ್ರಕಟಣೆ ತಿಳಿಸಿದೆ.

ಉತ್ತರ ಪ್ರದೇಶದ ಅಧಿಕಾರಿಗಳ ಜೊತೆಯೂ ಪ್ರಭು ಚವ್ಹಾಣ್ ಚರ್ಚೆ ನಡೆಸಿ ಮಸೂದೆ ಜಾರಿಗೆ ಕೈಗೊಳ್ಳಬಹುದಾದ ಕ್ರಮಗಳ ಬಗ್ಗೆ ಹಾಗೂ ಗೋ ಶಾಲೆಗಳ ನಿರ್ವಹಣೆಯ ಬಗ್ಗೆಯೂ ಸಮಾಲೋಚನೆ ನಡೆಸಿದ್ದಾರೆ. ಅಲ್ಲಿನ ಪಶು ಸಂಗೋಪನೆ ಇಲಾಖೆಯ ಅಧಿಕಾರಿಗಳ ಜೊತೆ ಉತ್ತಮ ದೇಸಿ ತಳಿಯ ಗೋವುಗಳ ಬಗ್ಗೆ ಚರ್ಚೆ ನಡೆಸಿದ್ದು, ಸಾಹಿವಾಲ್ ತಳಿಯ ಎರಡು ಎತ್ತು ಮತ್ತು ಹತ್ತು ದನಗಳನ್ನು ರಾಜ್ಯಕ್ಕೆ ಕಳುಹಿಸಿಕೊಡಲು ಅಧಿಕಾರಿಗಳು ಒಪ್ಪಿದ್ದಾರೆ ಎಂದು ಚವ್ಹಾಣ್ ಹೇಳಿದ್ದಾರೆ.



ಗೋಹತ್ಯೆ ನಿಷೇಧ ಸಂಬಂಧ ಚರ್ಚಿಸಲು ಸಚಿವ ಪ್ರಭು ಚವ್ಹಾಣ್ ಅವರು ಉತ್ತರಪ್ರದೇಶ ಸಿಎಂ ಯೋಗಿ ಆದಿತ್ಯನಾಥ್ ಅವರನ್ನು ಭೇಟಿ ಮಾಡಿದರು.